ಗುರುವಾರ 20.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 104
Digital Varthe Kannada Daily
Volume 01 - Issue 104
Thursday 20.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ



ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ಮಲಗಿದ್ದ ಕೋಣೆಯಲ್ಲಿ ಉಸಿರುಗಟ್ಟಿ ಮೂವರು ಯುವಕರು ಸಾವು ಓರ್ವನ ಸ್ಥಿತಿ ಗಂಭೀರ

**ಬೆಳಗಾವಿ:** ಚಳಿ ಗಾಲದಿಂದ ಪಾರಾಗಲು ಕೋಣೆಯೊಳಗೆ ಇದ್ದಿಲು ಬೆಂಕಿ ಇಟ್ಟುಕೊಂಡು ಮಲಗಿದ್ದ ನಾಲ್ವರು ಯುವಕರಲ್ಲಿ ಮೂವರು ಉಸಿರುಗಟ್ಟಿ ದಾರುಣವಾಗಿ ಮೃತಪಟ್ಟಿರುವ ಘಟನೆ ಬೆಳಗಾವಿಯ ಅಮನ್‌ನಗರದಲ್ಲಿ ನಡೆದಿದೆ. ಒಬ್ಬ ಯುವಕನ ಸ್ಥಿತಿ ಗಂಭೀರವಾಗಿದ್ದು, ಆಸ್ಪತ್ರೆ ಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಮೃತಪಟ್ಟವರಲ್ಲಿ ರಿಹಾನ್ ಮತ್ತೆ(22), ಮೋಹಿನ್ ನಾಲಬಂದ(23), ಸರ್ಫರಾಜ್ ಹರ ಪ್ಪನಹಳ್ಳಿ(22) ಎಂಬುವವರು

ಸ್ಥಳದಲ್ಲೇ ಪ್ರಾಣಬಿಟ್ಟಿದ್ದಾರೆ. ಶಾಹನಾವಾಜ್(19) ಎಂಬ ನಾಲ್ಕನೆಯ ಯುವಕ ನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಕಳೆದ ರಾತ್ರಿ ಕಾರ್ಯಕ್ರಮವೊಂದಕ್ಕೆ ತೆರಳಿ ಮರಳಿದ್ದ ನಾಲ್ವರು ಸ್ನೇಹಿತರು ತಮ್ಮ ಬಾಡಿಗೆ ಮನೆಯ ಕೋಣೆಯಲ್ಲಿ ಒಟ್ಟಿಗೆ ಮಲಗಿದ್ದರು. ರಾತ್ರಿ ವೇಳೆ ಇನ್ನಷ್ಟು ಚಳಿ ಹೆಚ್ಚಾಗಿದ್ದು, ಬೆಚ್ಚಗಿರಲು ಅವರು ಕೋಣೆಯ ಮಧ್ಯೆ ಇದ್ದಿಲಿನ ಬೆಂಕಿ ಹಚ್ಚಿದ್ದರು. ಜೊತೆಗೆ ಚಳಿ ತಡೆಯಲು ಬಾಗಿಲು ಕಿಟಕಿ ಮುಚ್ಚಿದ್ದಾರೆ.

ಸುಸ್ತಾಗಿ ಮನೆಗೆ ಬಂದಿದ್ದ ಯುವಕರು ತಕ್ಷಣವೇ ನಿದ್ರೆಗೆ ಜಾರಿದ್ದಾರೆ. ಆದರೆ ನಿದ್ರೆಯಲ್ಲಿರುವಾಗಲೇ ಇದ್ದಿಲಿನ ಬೆಂಕಿ ಉರಿಯದೇ ಹೊಗೆ ತುಂಬಿಕೊಂಡಿದೆ. ಮುಚ್ಚಿದ ಕೋಣೆಯಲ್ಲಿ ಆಮ್ಲಜನಕದ ಕೊರತೆಯಿಂದಾಗಿ ಯುವಕರು ಉಸಿರಾಟದ ತೊಂದರೆಗೆ ಒಳಗಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಹೇಳಲಾಗಿದೆ.

ಸ್ಥಳಕ್ಕೆ ಮಾಳ ಮಾರುತಿ ಪೊಲೀಸ್ ಠಾಣೆಯ ಸಿಬ್ಬಂದಿ ತಕ್ಷಣ ತೆರಳಿ ಪರಿಶೀಲನೆ ನಡೆಸಿದರು. ಪ್ರದೇಶದ ಶಾಸಕ ಆಸೀಫ್ ಸೇಠ್ (ಅಸೀಫ್ ಸೇಠ್) ಸಹ ಆಗಮಿಸಿ ಘಟನಾ ಸ್ಥಳವನ್ನು ವೀಕ್ಷಿಸಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಮೂವರು ಯುವಕರ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಜಿಲ್ಲಾ ಆಸ್ಪತ್ರೆಯ ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ. ಪೊಲೀಸರು ಇದ್ದಿಲಿನ ತೊಟ್ಟಿಯಲ್ಲಿದ್ದ ಬೂದಿ ಮತ್ತು ಉಳಿದ ಭಸ್ಮದ ಮಾದರಿಗಳನ್ನು ಸಂಗ್ರಹಿಸಿ ಫೊರೆನ್ಸಿಕ್ ಪರೀಕ್ಷೆಗೆ ಕಳುಹಿಸಿದ್ದಾರೆ.

## ಆಸ್ಟ್ರೇಲಿಯಾದಲ್ಲಿ ಅಪಘಾತ – ಬೆಂಗಳೂರಿನ ಟೆಕ್ಕಿ ಸಾವು



**ಸಿಡ್ನಿ:** ಆಸ್ಟ್ರೇಲಿಯಾದ ಸಿಡ್ನಿ ನಗರದಲ್ಲಿ ಸಂಭವಿಸಿದ ಅಪಘಾತದಲ್ಲಿ ಬೆಂಗಳೂರು ಮೂಲದ ಟೆಕ್ಕಿಯೊಬ್ಬರು ಮೃತಪಟ್ಟಿದ್ದಾರೆ. ಸಮನ್ವಿತಾ ಧಾರೇಶ್ವರ್ (33) ಮೃತ ಮಹಿಳೆ. ನ.8 ರಂದು ಈ ಘಟನೆ ನಡೆದಿದ್ದು ಪತಿ ಮತ್ತು 3 ವರ್ಷದ ಮಗನೊಂದಿಗೆ ಜರ್ಜ್ ಸೇಂಟ್ ಇನ ಹಾರ್ನ್‌ಸ್ಬಿ ಬಳಿ ರಸ್ತೆ ದಾಟುತ್ತಿದ್ದ ಸಂದರ್ಭದಲ್ಲಿ ಕಾರೊಂದು ಗುದ್ದಿದೆ. ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡು ಅವರು ಮೃತಪಟ್ಟಿದ್ದಾರೆ.

ಶುಕ್ರವಾರ ರಾತ್ರಿ 8 ಗಂಟೆಗೆ ಈ ಕುಟುಂಬ ರಸ್ತೆ ದಾಟುತ್ತಿತ್ತು. ದಾರಿಯಲ್ಲಿ ಬರುತ್ತಿದ್ದ ಕಿಯಾ ಕಾರ್ನಿವಲ್ ಚಾಲಕ ಕಾರನ್ನು ನಿಲ್ಲಿಸಿ ಕುಟುಂಬಕ್ಕೆ ದಾರಿ ಮಾಡಿಕೊಟ್ಟಿದ್ದ. ಆದರೆ ಈ ಕಾರಿಗೆ ಹಿಂದಿನಿಂದ ವೇಗವಾಗಿ ಬಂದ ಬಿಎಂಡಬ್ಲ್ಯು ಕಾರು ಬಲವಾಗಿ ಡಿಕ್ಕಿ ಹೊಡೆದ ಪರಿಣಾಮ, ಕಿಯಾ ಕಾರು ಸಮನ್ವಿತಾ ಅವರಿಗೆ ಡಿಕ್ಕಿ ಹೊಡೆದಿದೆ. ಸಮನ್ವಿತಾ ಅವರನ್ನು ಕೂಡಲೇ ತುರ್ತು ಚಿಕಿತ್ಸೆಗೆ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅಪಘಾತದಲ್ಲಿ ಗಂಭೀರ ಗಾಯಗೊಂಡಿದ್ದರಿಂದ ಅವರು ಕೆಲವೇ ಕ್ಷಣಗಳಲ್ಲಿ ಮೃತಪಟ್ಟಿದ್ದಾರೆ.

ಸಮನ್ವಿತಾ ಅವರು ಒಂದು ವಾರದಲ್ಲಿ ಹೆರಿಗೆಯಾಗಲಿದ್ದಾರೆ ಎಂದು ವೈದ್ಯರು ತಿಳಿಸಿದ್ದರು. ಅಪಘಾತದ ತೀವ್ರತೆಗೆ ಹೊಟ್ಟೆಯಲ್ಲಿದ್ದ ಮಗು ಮೃತಪಟ್ಟಿದೆ ಎಂದು ಪೊಲೀಸರು ಹೇಳಿದ್ದಾರೆ. ಬಿಎಂಡಬ್ಲ್ಯು ಓಡಿಸುತ್ತಿದ್ದ 19 ವರ್ಷದ ಯುವಕ ಮತ್ತು ಕಿಯಾ ಚಾಲನೆ ಮಾಡುತ್ತಿದ್ದ 48 ವರ್ಷದ ವ್ಯಕ್ತಿಯೂ ಗಾಯಗೊಂಡಿದ್ದಾರೆ. ಬಿಎಂಡಬ್ಲ್ಯು ಚಾಲಕ ಆರಾನ್ ಪಾಪಾಗ್ಲೂನನ್ನು ಪೊಲೀಸರು ಬಂಧಿಸಿದ್ದಾರೆ. ಅಜಾಗರೂಕತೆಯಿಂದ ಕಾರು ಚಾಲನೆ ಮಾಡಿದ ಆರೋಪದ ಅಡಿ ಕೇಸ್ ದಾಖಲಾಗಿದೆ. ಅಪಘಾತದ ಭೀಕರತೆಗೆ ದಿಗ್ಭ್ರಮೆ ವ್ಯಕ್ತಪಡಿಸಿರುವ ನ್ಯಾಯಾಲಯ ಚಾಲಕನಿಗೆ ಜಾಮೀನು ನೀಡಲು ನಿರಾಕರಿಸಿದೆ

ಸಮನ್ವಿತಾ ಅವರ ಅತ್ತೆ ಆಸ್ಟ್ರೇಲಿಯಾದಲ್ಲಿದ್ದರೆ, ಪೋಷಕರು ಈಗ ಮಗಳನ್ನು ನೋಡಲು ಸಿಡ್ನಿಗೆ ತೆರಳಿದ್ದಾರೆ. ಲಿಂಕ್‌ಡಿನ್ ಪ್ರೊಫೈಲ್‌ನಲ್ಲಿ ಅಲಸ್ಕೊ ಯೂನಿಫಾರ್ಮ್ಸ್ ಎಂಬ ಕಂಪನಿಯಲ್ಲಿ ಐಟಿ ಸಿಸ್ಟಂ ಅನಲಿಸ್ಟ್ ಆಗಿ ಕೆಲಸ ಮಾಡುತ್ತಿದ್ದೇನೆ ಸಮನ್ವಿತಾ ಬರೆದುಕೊಂಡಿದ್ದಾರೆ. ಸಮನ್ವಿತಾ ಬೆಂಗಳೂರಿನ ಆಕ್ಸ್‌ಫರ್ಡ್ ಕಾಲೇಜ್ ಆಫ್ ಎಂಜಿನಿಯರಿಂಗ್‌ನಲ್ಲಿ 2010 ರಿಂದ 2014 ರವರೆಗೆ ಎಂಜಿನಿಯರಿಂಗ್ ಪದವಿ ಓದಿದ್ದರು.

ಕುಟುಂಬ ಇತ್ತೀಚೆಗೆ ಗ್ರಂಥಮ್ ಫಾರ್ಮ್‌ನಲ್ಲಿ ಭೂಮಿಯನ್ನು ಖರೀದಿಸಿತ್ತು ಮತ್ತು ಎರಡು ಅಂತಸ್ತಿನ ಮನೆ ನಿರ್ಮಿಸಲು ಅನುಮೋದನೆಗಳಿಗಾಗಿ ಅರ್ಜಿ ಸಲ್ಲಿಸಿತ್ತು ಎಂದು ಆಸ್ಟ್ರೇಲಿಯಾದ ಮಾಧ್ಯಮಗಳು ವರದಿ ಮಾಡಿವೆ. ನೆರೆಹೊರೆಯವರು ಪ್ರತಿಕ್ರಿಯಿಸಿ, ಸಮನ್ವಿತಾ ಅವರು ತುಂಬಾ ಬೆರೆಯುವ, ಶಾಂತ ಮತ್ತು ಸಭ್ಯ ವ್ಯಕ್ತಿಯಾಗಿದ್ದರು. ಅಪಘಾತ ಸಂಭವಿಸುವ ಕೇವಲ ಎರಡು ಗಂಟೆಗಳ ಮೊದಲು ಧಾರೇಶ್ವರ್ ಅವರೊಂದಿಗೆ ಮಾತನಾಡಿದ್ದೆ ಎಂದು ಹೇಳಿದ್ದಾರೆ.

## ಶಬರಿಮಲೆಗೆ ತೆರಳುತ್ತಿದ್ದ ಬಸ್ ಪಲ್ಟಿ ಪ್ರಾಣಪಾಯದಿಂದ ಪಾರಾದ 35 ಮಂದಿ ಮಾಲಾಧಾರಿಗಳು



**ಕೃಷ್ಣರಾಜಪೇಟೆ:** ತಾಲೂಕಿನ ಶಬರಿಮಾಲೆಯ ಯಾತ್ರೆಗೆ ತೆರಳುತ್ತಿದ್ದ ಬಸ್ ಇಂದು ಮಧ್ಯಾಹ್ನ ಸುಮಾರು 1:00 ಗಂಟೆಯ ಸಮಯದಲ್ಲಿ ಏರಿಮಲೆಯ ಬಳಿ ಮಗುಚಿ ಬಿದ್ದ ಪರಿಣಾಮ ಬಸ್ಸ್ ನಲ್ಲಿ ತೆರಳುತ್ತಿದ್ದ ಕೃಷ್ಣರಾಜಪೇಟೆ ತಾಲ್ಲೂಕಿನ ಕಿಕ್ಕೇರಿ ಹೋಬಳಿಯ ಯಲಾದಹಳ್ಳಿ ಕೊಪ್ಪಲು ಗ್ರಾಮದ 35ಮಂದಿ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದೆ ಯಾವುದೇ ಪ್ರಾಣಪಾಯವಿಲ್ಲದೆ ಪಾರಾಗಿರುವ ಘಟನೆ ನಡೆದಿದೆ.

ಯಲಾದಹಳ್ಳಿ ಗ್ರಾಮದಿಂದ ಸೋಮವಾರ ಇರುಮುಡಿ ಕಟ್ಟಿಕೊಂಡು ಹೊರಟಿದ್ದ ಗ್ರಾಮದ ನಿಂಗರಾಜು, ಮಂಜು, ವಿಜಯ್, ಲಿಂಗರಾಜು ಸೇರಿದಂತೆ 35ಮಂದಿ ಇದ್ದ ಮಿನಿ ಬಸ್ಸ್ ನಲ್ಲಿ ಶಬರಿಮಲೆ ಯಾತ್ರೆಗೆ ಸಮೀಪದ ಏರಿಮಲೆ ಎಂಬ ಸ್ಥಳದಲ್ಲಿ ಬಸ್ಸಿನ ಬ್ರೇಕ್ ಫೈಲ್ಯೂರ್ ಆಗಿ ಚಾಲಕನ ನಿಯಂತ್ರಣ ತಪ್ಪಿದ ಬಸ್ಸ್ ಮರಕ್ಕೆ ಡಿಕ್ಕಿ ಹೊಡೆದು ಮಗುಚಿ ಬಿದ್ದಿದೆ, ಬಸ್ಸ್ ನಜ್ಜುಗುಜ್ಜಾದರೂ ಸಹ ಅದೃಷ್ಟವಶಾತ್ ಅಯ್ಯಪ್ಪ ಸ್ವಾಮಿ ಮಾಲದಾರಿಗಳಿಗೆ ಯಾರಿಗೂ ಗಂಭೀರವಾದ ಗಾಯಗಳಾಗಿಲ್ಲ ಎಲ್ಲರಿಗೂ ಸಣ್ಣ ಪುಟ್ಟ ಗಾಯಗಳಾಗಿದ್ದು ಎಲ್ಲರೂ ಆರೋಗ್ಯವಾಗಿದ್ದಾರೆ ಎಂದು ತಾಲ್ಲೂಕು ಆಡಳಿತದ ಮೂಲಗಳು ತಿಳಿಸಿವೆ,

ಘಟನಾ ಸ್ಥಳಕ್ಕೆ ಶಬರಿಮಾಲೆಯ ಪೋಲೀಸರು ಭೇಟಿ ನೀಡಿ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳಿಗೆ ಬದಲಿ ಬಸ್ ವ್ಯವಸ್ಥೆ ಮಾಡಿದ್ದಾರೆ ಜೊತೆಗೆ ವಿಶೇಷ ಅಯ್ಯಪ್ಪ ಸ್ವಾಮಿಯ ದರ್ಶನಕ್ಕೆ ಅವಕಾಶ ಮಾಡಿಕೊಟ್ಟಿದ್ದಾರೆ ಎಂದು ತಿಳಿದು ಬಂದಿದೆ ಪೋಲೀಸ್ ಮೂಲಗಳು ತಿಳಿಸಿವೆ,

## ಬೆಂಗಳೂರಿನಲ್ಲಿ ಹಾಡಹಗಲೇ 7.11 ಕೋಟಿ ರೂಪಾಯಿ ದರೋಡೆ



**ಬೆಂಗಳೂರು:** ನಗರದಲ್ಲಿ ಮಧ್ಯಾಹ್ನದ ವೇಳೆ ಬೃಹತ್ ದರೋಡೆ ನಡೆದಿದೆ. ಸುಮಾರು ₹7.11 ಕೋಟಿ ನಗದು ಹೊತ್ತೊಯ್ಯುತ್ತಿದ್ದ ಖಾಸಗಿ ಕ್ಯಾಶ್ ವ್ಯಾನ್ ವಾಹನವನ್ನು ದುಷ್ಕರ್ಮಿಗಳ ಗ್ಯಾಂಗ್ ತಡೆದು ನಿಲ್ಲಿಸಿ, ಕೇವಲ ಕೆಲವೇ ನಿಮಿಷಗಳಲ್ಲಿ ಹಣ ದೋಚಿ ಪರಾರಿಯಾಗಿದೆ. ಈ ಘಟನೆ ನಗರದ ಜಯದೇವ ಡೇರಿ ಸರ್ಕಲ್ (ಜೆ. ಪಿ. ನಗರ ಬಳಿ) ಬಳಿಯಲ್ಲಿ ಮಧ್ಯಾಹ್ನ ನಡೆದಿದೆ.

ಪೊಲೀಸರ ಪ್ರಾಥಮಿಕ ಮಾಹಿತಿ ಪ್ರಕಾರ, ಎಟಿಎಂಗಳಿಗೆ ಹಣ ತುಂಬಿಸುವ ಖಾಸಗಿ ಕಂಪನಿಯ ಕ್ಯಾಶ್ ವ್ಯಾನ್‌ನಲ್ಲಿ ಈ ದೊಡ್ಡ ಮೊತ್ತದ ಹಣವಿತ್ತು. ಈ ವಾಹನದಲ್ಲಿ ಇಬ್ಬರು ಕಸ್ಟೋಡಿಯನ್‌ಗಳು ಮತ್ತು ಡ್ರೈವರ್ ಇದ್ದರು. ಹಣವನ್ನು ಮತ್ತೊಂದು ವಾಹನಕ್ಕೆ ಸ್ಥಳಾಂತರಿಸುವ ಪ್ರಕ್ರಿಯೆ ನಡೆಯುತ್ತಿದ್ದ ಸಂದರ್ಭದಲ್ಲಿ ದುಷ್ಕರ್ಮಿಗಳು ಧಾಳಿ ನಡೆಸಿದ್ದಾರೆ. ದುಷ್ಕರ್ಮಿಗಳು ಎರಡು ಇನ್ನೋವಾ ಕ್ರಿಸ್ಟಾ ಕಾರುಗಳಲ್ಲಿ (ಬಿಳಿ ಬಣ್ಣ) ಬಂದಿದ್ದರು. ಒಟ್ಟು 6-7 ಜನ ಸದಸ್ಯರು ಇದ್ದ ಗ್ಯಾಂಗ್ ಸದಸ್ಯರು ಮುಖಕ್ಕೆ ಮಾಸ್ಕ್ ಧರಿಸಿದ್ದರು ಮತ್ತು ಕೈಯಲ್ಲಿ ಕತ್ತಿ, ಚಾಕು ಇತ್ಯಾದಿ ಆಯುಧಗಳನ್ನು ಹಿಡಿದಿದ್ದರು. ಕ್ಯಾಶ್ ವ್ಯಾನ್‌ನ್ನು ರಸ್ತೆಯಲ್ಲಿ ತಡೆದು ನಿಲ್ಲಿಸಿದ ಅವರು, ಕಸ್ಟೋಡಿಯನ್‌ಗಳನ್ನು ಬೆದರಿಕೆ ಹಾಕಿ ಹಣದ ಚೀಲಗಳನ್ನು ತಮ್ಮ ಕಾರಿಗೆ ವರ್ಗಾಯಿಸಿಕೊಂಡರು. ಇಡೀ ಘಟನೆ ಕೇವಲ 4-5 ನಿಮಿಷಗಳಲ್ಲಿ ಮುಗಿದಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಈ ಘಟನೆ ಸುದ್ದಗುಂಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಸ್ಥಳಕ್ಕೆ ತಕ್ಷಣ ದೌಡಾಯಿಸಿದ ಪೊಲೀಸರು ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸುತ್ತಿದ್ದಾರೆ. ದುಷ್ಕರ್ಮಿಗಳು ಯಾವ ದಿಕ್ಕಿಗೆ ತೆರಳಿದ್ದಾರೆ ಎಂಬುದರ ಬಗ್ಗೆ ಇನ್ನೂ ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲ. ಆದರೆ ಜಯದೇವ ಆಸ್ಪತ್ರೆ ಸರ್ಕಲ್‌ನ ಸುತ್ತಮುತ್ತಲಿನ ಸಿಸಿಟಿವಿ ಫೂಟೇಜ್‌ನಲ್ಲಿ ಎರಡು ಇನ್ನೋವಾ ಕಾರುಗಳು ವೇಗವಾಗಿ ಹೋಗುತ್ತಿರುವುದು ಸೆರೆಯಾಗಿದೆ.

ಈ ದರೋಡೆಯು ಬೆಂಗಳೂರಿನಲ್ಲಿ ಇತ್ತೀಚಿನ ದಿನಗಳಲ್ಲಿ ನಡೆದಿರುವ ಅತ್ಯಂತ ದೊಡ್ಡ ಹಗಲು ದರೋಡೆಗಳಲ್ಲಿ ಒಂದಾಗಿದೆ. ಕಳೆದ ಕೆಲವು ತಿಂಗಳುಗಳಿಂದಲೂ ನಗರದಲ್ಲಿ ಕ್ಯಾಶ್ ವ್ಯಾನ್‌ಗಳ ಮೇಲೆ ದಾಳಿ ಪ್ರಕರಣಗಳು ಹೆಚ್ಚಾಗುತ್ತಿವೆ. ಇದಕ್ಕೂ ಮುನ್ನ ರಾಜಾಜಿನಗರ, ಯಶವಂತಪುರ ಸೇರಿದಂತೆ ಹಲವೆಡೆ ಸಣ್ಣ-ಪುಟ್ಟ ಕ್ಯಾಶ್ ದರೋಡೆಗಳು ನಡೆದಿದ್ದವು. ಆದರೆ ₹7 ಕೋಟಿಗೂ ಅಧಿಕ ಮೊತ್ತದ ದರೋಡೆಯಾದರೂ ನಗರ ಪೊಲೀಸರಿಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ. ಈಗಾಗಲೇ ಬೆಂಗಳೂರು ಪೊಲೀಸ್ ಆಯುಕ್ತರು ಉನ್ನತ ಮಟ್ಟದ ತನಿಖಾ ತಂಡ ರಚಿಸಿದ್ದು, ಡಿಸಿಪಿ ದಕ್ಷಿಣ ವಿಭಾಗ ಮತ್ತು ಸ್ಥಳೀಯ ಎಸಿಪಿ ಮಟ್ಟದ ಅಧಿಕಾರಿಗಳ ನೇತೃತ್ವದಲ್ಲಿ ತನಿಖೆ ನಡೆಯುತ್ತಿದೆ. ದುಷ್ಕರ್ಮಿಗಳು ರಾಜ್ಯಾದ್ಯಂತ ಅಥವಾ ರಾಜ್ಯದಿಂದ ಹೊರಗೆ ತೆರಳಿರುವ ಸಾಧ್ಯತೆಯಿದ್ದು, ಎಲ್ಲಾ ಚೆಕ್‌ಪೋಸ್ಟ್‌ಗಳಿಗೆ ಅಲರ್ಟ್ ಜಾರಿ ಮಾಡಲಾಗಿದೆ.

ಈ ಘಟನೆಯಿಂದ ಎಟಿಎಂ ಕ್ಯಾಶ್ ಸಾಗಾಣಿಕೆ ಕಂಪನಿಗಳ ಸುರಕ್ಷತಾ ವ್ಯವಸ್ಥೆಯ ಮೇಲೆ ಗಂಭೀರ ಪ್ರಶ್ನೆ ಎದ್ದಿದೆ. ಹಗಲುಗುಂಬದಲ್ಲಿ, ಜನಜಂಗುಳಿ ಇರುವ ಪ್ರದೇಶದಲ್ಲಿ ಇಷ್ಟೊಂದು ದೊಡ್ಡ ಮೊತ್ತದ ಹಣವನ್ನು ಇಬ್ಬರು ಕಸ್ಟೋಡಿಯನ್ ಗಳೊಂದಿಗೆ ಸಾಗಿಸುತ್ತಿದ್ದುದು ಸಾಕಾಗದೇ ಇದ್ದಿರುವುದು ಸ್ಪಷ್ಟವಾಗಿದೆ. ಈ ಹಿನ್ನೆಲೆಯಲ್ಲಿ ಆರ್‌ಬಿಐ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಬ್ಯಾಂಕ್‌ಗಳಿಗೆ ಮತ್ತೆ ಸೂಚನೆ ನೀಡುವ ಸಾಧ್ಯತೆ ಇದೆ. ಪ್ರಸ್ತುತ ತನಿಖೆಯಲ್ಲಿ ದುಷ್ಕರ್ಮಿಗಳು ಮುಂಚಿತವಾಗಿ ಈ ವಾಹನದ ಚಲನವಲನವನ್ನು ಗಮನಿಸಿದ್ದಾರೆ ಎಂಬ ಅನುಮಾನವಿದೆ. ಒಳಗಿನಿಂದ ಮಾಹಿತಿ ಸೋರಿಕೆಯಾದ ಸಾಧ್ಯತೆ ಇದ್ದು ಪೊಲೀಸರು ಈ ಬಗ್ಗೆ ತನಿಖೆ ನಡೆಸುತ್ತಿದ್ದಾರೆ.

## ಸೌದಿ ಬಸ್ ದುರಂತ: 45 ಮೆಕ್ಕಾ ಯಾತ್ರಿಕರ ಶವ ಭಾರತಕ್ಕೆ ಬರಲ್ಲ



ಸೌದಿ ಅರೇಬಿಯಾದಲ್ಲಿ ನಡೆದ ಭೀಕರ ಬಸ್ ದುರಂತದಲ್ಲಿ ಸಾವನ್ನಪ್ಪಿದ 45 ಭಾರತೀಯ ಮೆಕ್ಕಾ-ಮದೀನಾ ಉಮ್ರಾ ಯಾತ್ರಿಕರ ಶವಗಳನ್ನು ಭಾರತಕ್ಕೆ ತರಲಾಗುವುದಿಲ್ಲ ಎಂಬ ಮಾಹಿತಿ ತಿಳಿದು ಬಂದಿದೆ. ಸೌದಿ ಸರ್ಕಾರದ ಕಠಿಣ ಕಾನೂನುಗಳು ಮತ್ತು ಯಾತ್ರಿಕರು ಹೊರಡುವ ಮೊದಲು ಸಹಿ ಮಾಡುವ ಘೋಷಣಾ ಪತ್ರಗಳ ಪ್ರಕಾರ, ಯಾತ್ರೆಯ ಸಂದರ್ಭದಲ್ಲಿ ಸೌದಿ ನೆಲದಲ್ಲಿ ಮರಣವಾದರೆ ಅಂತ್ಯಸಂಸ್ಕಾರ ಅಲ್ಲೀಗೇ ನಡೆಯಬೇಕು ಎಂಬ ನಿಯಮ ಜಾರಿಗೆ ಬರುತ್ತದೆ.

ದುರಂತ ಹೇಗೆ ಸಂಭವಿಸಿತು?

ಮೆಕ್ಕಾದಿಂದ ಮದೀನಾಕ್ಕೆ ಹೊರಟಿದ್ದ ಭಾರತೀಯ ಯಾತ್ರಿಕರ ಬಸ್ ಮುಹ್ರಾಸ್ ಪ್ರದೇಶದ ಬಳಿ ರಸ್ತೆ ಬದಿಯಲ್ಲಿ ನಿಂತಿದ್ದಾಗ ವೇಗವಾಗಿ ಬಂದ ಡೀಸೆಲ್ ಟ್ಯಾಂಕರ್ ಹಿಂದಿನಿಂದ ಬಸ್‌ಗೆ ಭೀಕರ ಡಿಕ್ಕಿ ಹೊಡೆದಿತು. ಭಾರತೀಯ ಕಾಲಮಾನ ಪ್ರಕಾರ ಬೆಳಗಿನ ಜಾವ 1.30ರ ಸುಮಾರಿಗೆ ಸಂಭವಿಸಿದ ಈ ಅಪಘಾತದಲ್ಲಿ ಬಸ್ ಬೆಂಕಿಗೆ ಆಹುತಿಯಾಗಿತ್ತು. ಒಬ್ಬ ವ್ಯಕ್ತಿಯನ್ನು ಹೊರತುಪಡಿಸಿ 45 ಯಾತ್ರಿಕರು ಸ್ಥಳದಲ್ಲೇ ಸಾವನ್ನಪ್ಪಿದರು. ಬದುಕುಳಿದ ಏಕೈಕ ವ್ಯಕ್ತಿ ಮೊಹಮ್ಮದ್ ಅಬ್ದುಲ್ ಶೋಯೆಬ್ (24), ಚಾಲಕನ ಪಕ್ಕದಲ್ಲಿ ಕುಳಿತಿದ್ದ ಕಾರಣ ಬದುಕುಳಿದಿದ್ದಾರೆ. ಅವರಿಗೆ ಸೌದಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಮೃತರಲ್ಲಿ 18 ಮಹಿಳೆಯರು, 17 ಪುರುಷರು ಮತ್ತು 10 ಮಕ್ಕಳು ಸೇರಿದ್ದಾರೆ.

ಶವಗಳನ್ನು ಭಾರತಕ್ಕೆ ತರಲಾಗುವುದಿಲ್ಲ: ಮೃತರ ಶರೀರಗಳನ್ನು ಭಾರತಕ್ಕೆ ತರದೆ, ಸೌದಿ ಅರೇಬಿಯಾದಲ್ಲೇ ಅಂತ್ಯಸಂಸ್ಕಾರ ಮಾಡಲು ತೆಲಂಗಾಣ ಸರ್ಕಾರ ನಿರ್ಧರಿಸಿದೆ. ಈ ನಿರ್ಧಾರದ ಹಿಂದೆ ಹಲವಾರು ಪ್ರಾಮುಖ್ಯ ಕಾರಣಗಳಿವೆ. ಸೌದಿ ಸರ್ಕಾರದಿಂದ ಪರಿಹಾರ ಸಿಗದಿರುವ ಕಾರಣ

ಸೌದಿಯಲ್ಲಿ ರಸ್ತೆ ಅಪಘಾತಗಳಿಗೆ ಸರ್ಕಾರ ನೇರ ಪರಿಹಾರ ನೀಡುವುದಿಲ್ಲ. ಪರಿಹಾರ ಪಡೆಯಲು, ಪೋಲೀಸ್ ತನಿಖೆಯಲ್ಲಿ ಟ್ಯಾಂಕರ್ ಚಾಲಕನ ತಪ್ಪು ಸಾಬೀತಾಗಬೇಕು. ನಂತರ ಕುಟುಂಬವು ಕಾನೂನು ಮೂಲಕ ಕೇಸ್ ಹಾಕಬೇಕು. ಈ ಪ್ರಕ್ರಿಯೆ ತಿಂಗಳುಗಳು-ವರ್ಷಗಳಿಗೂ ಸಾಗುವ ಸಾಧ್ಯತೆ ಇದೆ. ಈ ಕಾರಣದಿಂದ ಸಾವನ್ನಪ್ಪಿದ ಭಾರತೀಯ ಕುಟುಂಬಗಳು ತಕ್ಷಣ ಪರಿಹಾರ ಪಡೆಯಲು ಸಾಧ್ಯವಾಗುವುದಿಲ್ಲ. ಪುಟ 2ಕ್ಕೆ..

## ಹೆಬ್ಬಾಳದಿಂದ ಯಲಹಂಕ ಮೇಲ್ಸೇತುವೆ ಮೇಲೆ ಸರಣಿ ಅಪಘಾತ.



ಬೆಂಗಳೂರು: ನಗರದ ಹೆಬ್ಬಾಳದಿಂದ ಯಲಹಂಕತ್ತ ಸಾಗುವ ಮೇಲ್ಸೇತುವೆ ಮೇಲೆ ಗುರುವಾರ ಬೆಳಿಗ್ಗೆ ಸಂಭವಿಸಿದ ಸರಣಿ ಅಪಘಾತವು ಟ್ರಾಫಿಕ್‌ನಲ್ಲಿ ಭಾರೀ ಅರಾಜಕತೆ ಉಂಟುಮಾಡಿತು.

ಬೆಳಿಗ್ಗೆ ಆಫೀಸ್ ಸಮಯದಲ್ಲಿ ನಡೆದ ಈ ಘಟನೆ ಹಲವು ವಾಹನ ಸವಾರರನ್ನು ಗಂಟೆಗಳ ಕಾಲ ತೊಂದರೆಗೆ ಒಳಪಡಿಸಿತು.

ಘಟನೆಯ ಪ್ರಕಾರ, ಕ್ಯಾಂಟರ್ ವಾಹನದ ಚಾಲಕ ಅಜಾಗರೂಕತೆಯಿಂದ ವಾಹನವನ್ನು ನಿಯಂತ್ರಣ ತಪ್ಪಿಸಿ ಮುಂದೆ ಸಾಗುತ್ತಿದ್ದ ಕಾರಿನ ಮೇಲೆ ಡಿಕ್ಕಿ ಹೊಡೆದಿದ್ದಾನೆ. ಇದರ ಪರಿಣಾಮವಾಗಿ ಹಿಂಬದಿಯಿಂದ ಬರುತ್ತಿದ್ದ ಇನ್ನೂ ನಾಲ್ಕು-ಐದು ಕಾರುಗಳು ಪರಸ್ಪರ ಡಿಕ್ಕಿ ಹೊಡೆದು ಸರಣಿ ಅಪಘಾತ ಉಂಟಾಗಿದೆ. ವಾಹನಗಳು ನಜ್ಜುಗುಜ್ಜಾಗಿದ್ದು, ಕೆಲ ಕಾರುಗಳು ಗಂಭೀರವಾಗಿ ಹಾನಿಗೊಳಗಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸದಿದ್ದರೂ ವಾಹನ ಸವಾರರಲ್ಲಿ ಭೀತಿ ಮತ್ತು ರೋಷ ಹೆಚ್ಚಾಯಿತು.

ಅಪಘಾತದ ನಂತರ ರೊಚ್ಚಿಗೆದ್ದ ವಾಹನ ಸವಾರರು ಕ್ಯಾಂಟರ್ ಚಾಲಕನ ಮೇಲೆ ದಾಳಿ ಮಾಡಲು ಮುಂದಾದರು. ಚಾಲಕನ ನಿರ್ಲಕ್ಷ್ಯದಿಂದ ತಮ್ಮ ವಾಹನಗಳಿಗೆ ಹಾನಿ ಉಂಟಾಗಿದೆ ಎಂಬ ಆಕ್ರೋಶದಿಂದ ಹಲವರು ಅವನ ಮೇಲೆ ಕೈ ಎತ್ತಲು ಪ್ರಯತ್ನಿಸಿದರು. ಪರಿಸ್ಥಿತಿ ಕ್ಷಣ ಕ್ಷಣಕ್ಕೂ ನಿಯಂತ್ರಣ ತಪ್ಪುವ ಸ್ಥಿತಿಯಲ್ಲಿದ್ದಾಗ, ಇದೇ ಮಾರ್ಗವಾಗಿ ಡ್ಯೂಟಿಗೆ ಬರುತ್ತಿದ್ದ ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಸಾದಿಕ್ ಪಾಷ ಅವರು ಘಟನೆ ಸ್ಥಳಕ್ಕೆ ತಲುಪಿದರು.

ಇನ್ಸ್‌ಪೆಕ್ಟರ್ ಸಾದಿಕ್ ಪಾಷ ಅವರು ಘಟನೆಯ ಗಂಭೀರತೆಯನ್ನು ಗುರುತಿಸಿ ಮೊದಲಿಗೆ ಚಾಲಕನನ್ನು ಗುಂಪಿನಿಂದ ಸುರಕ್ಷಿತ ಸ್ಥಳಕ್ಕೆ ಕೊಂಡೊಯ್ದರು. ನಂತರ ವಾಹನ ಸವಾರರನ್ನು ಸಮಾಧಾನಗೊಳಿಸಿ, ಕಾನೂನು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಟ್ರಾಫಿಕ್ ಗದ್ದಲವನ್ನು ನಿಯಂತ್ರಣಕ್ಕೆ ತಂದು, ಘಟನಾ ಸ್ಥಳದಲ್ಲಿ ಶಾಂತಿ ಸ್ಥಾಪನೆ ಮಾಡಲು ಅವರು ತ್ವರಿತ ಕ್ರಮ ಕೈಗೊಂಡರು. ಅವರ ಹಸ್ತಕ್ಷೇಪದಿಂದ ದೊಡ್ಡ ಮಟ್ಟದ ಅನಾಹುತ ತಪ್ಪಿ, ಚಾಲಕ ಜೀವಪಾಯದಿಂದ ಪಾರಾಗಿದ್ದಾನೆ.

ಪರಿಸ್ಥಿತಿ ನಿಯಂತ್ರಣಕ್ಕೆ ಬಂದ ನಂತರ ಯಲಹಂಕ ಟ್ರಾಫಿಕ್ ಪೊಲೀಸರು ಸ್ಥಳಕ್ಕೆ ಆಗಮಿಸಿ ವಾಹನಗಳನ್ನು ತೆರವುಗೊಳಿಸುವ ಕಾರ್ಯ ಆರಂಭಿಸಿದರು. ಅಪಘಾತಕ್ಕೆ ಕಾರಣವಾದ ಕ್ಯಾಂಟರ್ ಚಾಲಕನ ವಿರುದ್ಧ ನಿರ್ಲಕ್ಷ್ಯ ಚಾಲನೆ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮೇಲ್ಸೇತುವೆ ಮೇಲೆ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಟ್ರಾಫಿಕ್ ನಿಧಾನಗತಿಯಲ್ಲಿ ಸಾಗಿದ್ದು, ನಂತರ ಸಾಮಾನ್ಯ ಸ್ಥಿತಿಗೆ ಮರಳಿತು.

ನಗರದ ಪ್ರಮುಖ ರಸ್ತೆಯಲ್ಲಿ ಸಂಭವಿಸಿದ ಈ ಅಪಘಾತ ಮತ್ತೊಮ್ಮೆ ಸುರಕ್ಷಿತ ಚಾಲನೆ ಮತ್ತು ಶಿಸ್ತುಬದ್ಧ ಸಂಚಾರದ ಅಗತ್ಯತೆಯನ್ನು ನೆನಪಿಸಿದೆ.

## ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ವಿ. ಮುನಿರಾಜು ಅವರಿಗೆ ಸೇವಾ ರತ್ನ ಪ್ರಶಸ್ತಿ



ದೇವನಹಳ್ಳಿ: ದುದ್ದನಹಳ್ಳಿ ಹಾಲು ಉತ್ಪಾದಕರ ಸಹಕಾರವು ಲಾಭಾಂಶದಲ್ಲಿ ಪ್ರಗತಿ ಹೊಂದಲು ವಿ.ಮುನಿರಾಜು ಅವರ ಕೊಡುಗೆ ಬಹಳಷ್ಟಿದ್ದು, ಹಾಗಾಗಿ ಡೇರಿಯ ಆಡಳಿತ ಮಂಡಳಿಯ ನಿರ್ಣಯದಂತೆ ಸನ್ಮಾನಿಸಿ ಗೌರವಿಸಲಾಗಿದೆ ಎಂದು ಡೇರಿ ಮಾಜಿ ಅಧ್ಯಕ್ಷ ಮಂಜುನಾಥ್ ಅಭಿಪ್ರಾಯಿಸಿದರು.

ದೇವನಹಳ್ಳಿ ತಾಲೂಕಿನ ದುದ್ದನಹಳ್ಳಿ ಉತ್ಪಾದಕರ ಸಹಕಾರ ಸಂಘದ ಕಚೇರಿಯಲ್ಲಿ ವಿ.ಮುನಿರಾಜು ಅವರಿಗೆ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಾಗಿದ್ದು ಡೇರಿ ಕಾರ್ಯಕಾರಿ ಮಂಡಳಿಯಿಂದ ಸನ್ಮಾನಿಸಿ ಗೌರವಿಸಿದ ಬಳಿಕ ಮಾತನಾಡಿದರು.

ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ವಿ.ಮುನಿರಾಜು ಅವರು ಮಾತನಾಡಿ, ಕುಂದಾಣ ಹೋಬಳಿಯಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಕೃಷಿ ಜಮೀನುಗಳನ್ನು ಸರ್ಕಾರ ಭೂಸ್ವಾಧೀನ ಪಡಿಸಿಕೊಂಡರು ಅಲ್ಪ-ಸ್ವಲ್ಪ ಉಳಿದ ಹಸಿಮೇವಿನ ಸಮಸ್ಯೆ ಇದ್ದರೂ ಡೇರಿಯಲ್ಲಿ ಹಾಲಿನ ಪ್ರಮಾಣ ಕಡಿಮೆ ಮಾಡದಂತೆ ರೈತರಿಗೆ ಅಗತ್ಯ ತಿಳುವಳಿಕೆ ನೀಡಲಾಗಿದೆ.

ಕಡಿಮೆ ಬಡ್ಡಿ ದರದಲ್ಲಿ ಹಸು ಸಾಲ, ಬೆಳೆ ಸಾಲವನ್ನು ಪಿ ಎಲ್ ಡಿ ಬ್ಯಾಂಕ್ ಸೇರಿದಂತೆ ವಿವಿಧ ಸಹಕಾರ ಸಂಘ ಗಳಲ್ಲಿ ನೀಡಲಾಗುತ್ತದೆ. ಸಹಕಾರ ಸಂಘಗಳಲ್ಲಿ ಪ್ರಾಮಾಣಿಕವಾಗಿ ಯಾರು ಸಲ್ಲಿಸುತ್ತಾರೆ ಅವರಿಗೆ ಇಂಥ ಪುರಸ್ಕಾರಗಳು ದೊರೆಯಲಿದೆ. ನನ್ನಂತೆ ತಾವೆಲ್ಲ ಉನ್ನತ ಸ್ಥಾನಮಾನಗಳಲ್ಲಿ ಗುರುತಿಸಿಕೊಳ್ಳುವ ಮೂಲಕ ಹೈನುಗಾರಿಕೆ ಅವಲಂಬಿತ ರೈತರ ಅಭಿವೃದ್ಧಿಗೆ ಶ್ರಮಿಸಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಡೇರಿ ಅಧ್ಯಕ್ಷ ಮೋಹನ್ ಕುಮಾರ್, ನಿರ್ದೇಶಕರಾದ ಡಿಎಚ್. ಮಂಜುನಾಥ್ ಗೌಡ, ಡಿಎನ್. ನಾರಾಯಣಸ್ವಾಮಿ, ಬಾಲೇಂದ್ರ, ಡಿಎಂ ಮುನಿರಾಜು, ಚನ್ನಕೃಷ್ಣಪ್ಪ, ಸಂಪಂಗಿಪ್ಪ, ಭಾಗ್ಯಮ್ಮ, ಶಶಿಕಲಾ, ಗ್ರಾಮದ ಮುಖಂಡ ರಂಗಸ್ವಾಮಿ, ವಿಸ್ತರಣಾದಿಕಾರಿ ವಿಜಯ ಕುಮಾರ್, ದುದ್ದನಹಳ್ಳಿ ಡೈರಿ ಕಾರ್ಯದರ್ಶಿ ಡಿ.ಎಂ.ಆನಂದ ಮೂರ್ತಿ, ಸಿಬ್ಬಂದಿ ನಾಗೇಶ್,ರಮೇಶ್ ಇದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಶಬರಿಮಲೆ ಭಕ್ತರಿಗೆ ರಾಜ್ಯ ಆರೋಗ್ಯ ಇಲಾಖೆಯ ಮಾರ್ಗಸೂಚಿ

**ಬೆಂಗಳೂರು**: ಕೇರಳದ ಶಬರಿಮಲೆ ದೇವಸ್ಥಾನವನ್ನು ಭಕ್ತರ ದರ್ಶನಕ್ಕೆ ತೆರೆಯಿರುವ ಸಂದರ್ಭದಲ್ಲಿ, ರಾಜ್ಯದ ಆರೋಗ್ಯ ಇಲಾಖೆಯು 'ನೇಗ್ಲೇರಿಯಾ ಫೌಲೇರಿ' ಎಂಬ ಮಿದುಳು ತಿನ್ನುವ ಅಮೀಬಾದ ಸೋಂಕು ಕುರಿತು ಗಂಭೀರ ಎಚ್ಚರಿಕೆ ಹಾಗೂ ಮಾರ್ಗಸೂಚಿಗಳನ್ನು ಹೊರಡಿಸಿದೆ.

### ಲಕ್ಷಣಗಳು

- ತೀವ್ರ ಜ್ವರ
- ತಲೆ ಸೀಳುವಂತೆ ನೋವು
- ವಾಕರಿಕೆ, ವಾಂತಿ
- ಕುತ್ತಿಗೆ ಬಿಗಿತ
- ಗೊಂದಲ, ಪ್ರಜ್ಞಾಹೀನತೆ
- ವರ್ತನೆಯಲ್ಲಿ ತೀವ್ರ ಬದಲಾವಣೆ
- ದೃಷ್ಟಿ ಮಂದ, ಸೆಳೆತ

ಕೇರಳದಲ್ಲಿ ಅತ್ಯಂತ ಮಾರಕ ಸೋಂಕು ಪ್ರಕರಣಗಳು ವರದಿಯಾಗಿವೆ. ಇದರಿಂದ ಆತಂಕಗೊಂಡ ಕರ್ನಾಟಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಶಬರಿಮಲೆ ಯಾತ್ರಿಗಳಿಗಾಗಿ ವಿಶೇಷ ಮಾರ್ಗಸೂಚಿ ಬಿಡುಗಡೆ ಮಾಡಿದೆ.

ನೇಗ್ಲೇರಿಯಾ ಫೌಲೇರಿ ಎಂದರೇನು: ನೇಗ್ಲೇರಿಯಾ ಫೌಲೇರಿ ಒಂದು ಸ್ವತಂತ್ರ ಬದುಕುವ ಅಮೀಬಾ. ಇದು ಬೆಚ್ಚಗಿನ ಸಿಹಿ ನೀರು ಮತ್ತು ಮಣ್ಣಿನಲ್ಲಿ ವಾಸಿಸುತ್ತದೆ. ಕೊಳವೆ ನೀರು, ಕೆರೆ, ಸರೋವರ, ನಿಂತ ನೀರು, ಈಜುಕೊಳಗಳು ಇವೆಲ್ಲವೂ ಇದರ ನೆಚ್ಚಿನ ಆವಾಸಸ್ಥಾನಗಳು.

ಈ ಸೋಂಕು ವ್ಯಕ್ತಿಯಿಂದ ವ್ಯಕ್ತಿಗೆ ಹರಡುವುದಿಲ್ಲ. ಕಲುಷಿತ ನೀರು ಕುಡಿದರೂ ಸೋಂಕು ಬರುವುದಿಲ್ಲ. ಆದರೆ ನೀರಿನಲ್ಲಿ ಈಜುವಾಗ ಅಥವಾ ಮುಳುಗುವಾಗ ಮೂಗಿನ ಮೂಲಕ ಒಳಗೆ ಹೋದರೆ ಮಾತ್ರ ಈ ಅಮೀಬಾ ಮೆದುಳಿನತ್ತ ಪಯಣ ಬೆಳೆಸುತ್ತದೆ. ಇದು ಮೆದುಳಿನ ರಕ್ತನಾಳಗಳ ಮೂಲಕ ಪ್ರಯಾಣಿಸಿ ಪ್ರಾಥಮಿಕ ಅಮೀಬಿಕ್ ಮೆನಿಂಗೊಎನ್ಸೆಫಲೈಟಿಸ್ (PAM) ಎಂಬ ಮಾರಣಾಂತಿಕ ಖಾಯಿಲೆ ಉಂಟುಮಾಡುತ್ತದೆ. ಸೋಂಕು ದೃಢಪಟ್ಟ ನಂತರ ಬದುಕುವ ಪ್ರಮಾಣ ಶೇ. 1-2 ಮಾತ್ರ!.

ಕರ್ನಾಟಕದಲ್ಲಿ ಸ್ಥಿತಿ: ಇದುವರೆಗೆ ಕರ್ನಾಟಕದಲ್ಲಿ ನೇಗ್ಲೇರಿಯಾ ಫೌಲೇರಿ ಸೋಂಕಿನ ಯಾವುದೇ ಪ್ರಕರಣ ವರದಿಯಾಗಿಲ್ಲ. ಆದರೂ ಶಬರಿಮಲೆಗೆ ತೆರಳಿ ಮರಳುವ ಭಕ್ತರ ಸಂಖ್ಯೆ ದೊಡ್ಡದಿದ್ದರಿಂದ ಆರೋಗ್ಯ ಇಲಾಖೆ ಸಂಪೂರ್ಣ ಅಲರ್ಟ್ ಆಗಿದೆ. ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಕ್ತ ಸಿದ್ಧತೆ ಕೈಗೊಳ್ಳಲು ಸೂಚನೆ ನೀಡಲಾಗಿದೆ.

### ಆರೋಗ್ಯ ಇಲಾಖೆ ನೀಡಿರುವ ಪ್ರಮುಖ ಸಲಹೆಗಳು

- ಪಂಪಾ ನದಿ, ಕೆರೆ, ನಿಂತ ನೀರಿನ ಕೊಳಗಳಲ್ಲಿ ಸ್ನಾನ ಮಾಡುವಾಗ ಮೂಗಿಗೆ ನೀರು ಹೋಗದಂತೆ ಎಚ್ಚರ ವಹಿಸಿ.
- ಮೂಗಿನ ಕ್ಲಿಪ್ (nose clip) ಬಳಸಿ ಅಥವಾ ಬೆರಳಿನಿಂದ ಮೂಗನ್ನು ಬಿಗಿಯಾಗಿ ಮುಚ್ಚಿಕೊಂಡು ಮುಳುಗಿ.
- ಶುದ್ಧವಾದ, ಹರಿವಿನ ನೀರಿನಲ್ಲಿ ಮಾತ್ರ ಸ್ನಾನ ಮಾಡಿ.
- ನಿಂತ ನೀರು ಅಥವಾ ಬೆಚ್ಚಗಿನ ಕೊಳಗಳಲ್ಲಿ ತಲೆ ಮುಳುಗಿಸಿ ಈಜಾಡಬೇಡಿ.
- ಮಕ್ಕಳು ಆಟವಾಡುವಾಗ ಇನ್ನಷ್ಟು ಎಚ್ಚರಿಕೆ ವಹಿಸಿ.

# 'ಯಕ್ಷಗಾನ ಕಲಾವಿದರಲ್ಲಿ ಬಹುತೇಕರು ಸಲಿಂಗಿಗಳು' ಪ್ರೊ. ಪುರುಷೋತ್ತಮ ಬಿಳಿಮಲೆ



**ಬೆಂಗಳೂರು**: ಯಕ್ಷಗಾನ ಕಲಾವಿದರಲ್ಲಿ ಬಹುತೇಕರು ಸಲಿಂಗಕಾಮಿಗಳು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ. ಪುರುಷೋತ್ತಮ್ ಬಿಳಿಮಲೆ ಅವರು ವಿವಾದಾತ್ಮಕ ಹೇಳಿಕೆ ಹೇಳಿದ್ದು, ರಾಜ್ಯದಲ್ಲಿ ತೀವ್ರ ಚರ್ಚೆ ಮತ್ತು ವಿವಾದಕ್ಕೆ ಕಾರಣವಾಗಿದೆ. ಮೈಸೂರಿನ ಮಾಸನಗಂಗೋತ್ರಿಯ ಪ್ರಸಾರಾಂಗದಲ್ಲಿ ನಡೆದ ಕೃತಿಗಳ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಈ ಹೇಳಿಕೆ ನೀಡಿದ್ದಾರೆ. ಕಾರ್ಯಕ್ರಮದಲ್ಲಿ ಬಿಳಿಮಲೆ ಅವರು ಯಕ್ಷಗಾನ ಮೇಳಗಳಲ್ಲಿ ಕಲಾವಿದರು ಎದುರಿಸುತ್ತಿದ್ದ ಸಾಮಾಜಿಕ ಮತ್ತು ಮಾನಸಿಕ ಒತ್ತಡಗಳ ಬಗ್ಗೆ ಮಾತನಾಡುವ ವೇಳೆ, ಯಕ್ಷಗಾನ ಕಲಾವಿದರಿಗೆ ಸಂಬಂಧಿಸಿದ ಕೆಲವು ಹೇಳಿಕೆಗಳನ್ನು ನೀಡಿದ್ದಾರೆ. "ಯಕ್ಷಗಾನ ಕಲಾವಿದರಲ್ಲಿ ಬಹುತೇಕರು ಸಲಿಂಗಿ ಕಾಮಿಗಳು" ಎಂದು ಅವರ ಹೇಳಿಕೆ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದ್ದು, ಭಾರೀ ವಿವಾದ ಸೃಷ್ಟಿಸಿದೆ. "ನಾವು ಸತ್ಯವನ್ನು ಹೇಳಲೇಬೇಕು ಹಿಂಜರಿಯಬಾರದು". ಯಕ್ಷಗಾನ ಕಲಾವಿದರು ವರ್ಷಕ್ಕೆ 6-7 ತಿಂಗಳು ಮೇಳ ದೊಂದಿಗೆ ತಾಲೂಕು-ತಾಲೂಕು ಸುತ್ತುತ್ತಾರೆ. ಗ್ರಾಮೀಣ ಜನತೆಯಲ್ಲಿ ಇನ್ನೂ "ಯಕ್ಷಗಾನ ಕಲಾವಿದನಿಗೆ ಹುಡುಗಿ ಕೊಡುವುದಿಲ್ಲ". ಸ್ತ್ರೀ ವೇಷಧಾರಿಗಳು ಒತ್ತಡದಲ್ಲಿರುತ್ತಿದ್ದರು. "ಸ್ತ್ರೀ ವೇಷ ತೊಟ್ಟವರು ಒಂದು ವೇಳೆ ಭಾಗವತರ ಸಲಿಂಗಕಾಮದ ಪ್ರಸ್ತಾಪವನ್ನು ನಿರಾಕರಿಸಿದರೆ, ಭಾಗವತರು ಪದ್ಯವನ್ನೇ ಕೊಡುತ್ತಿರಲಿಲ್ಲ. ರಂಗದ ಮೇಲೆ ಅವಕಾಶವೇ ಇಲ್ಲದಾದರ ಆ ಕಲಾವಿದನ ಬದುಕೇ ಇಲ್ಲವಾ ಗುತ್ತಿತ್ತು" ಎಂದು ಬಿಳಿಮಲೆ ಬಯಲು ಮಾಡಿದ್ದಾರೆ.

# ಭಾರತದ ಮೇಲೆ ದೊಡ್ಡ ಆತ್ಮಾಹುತಿ ದಾಳಿ ಸಂಚು ಜೈಷ್ ಸಂಘಟನೆಯಿಂದ ಕೋಟ್ಯಂತರ ರೂ. ಸಂಗ್ರಹ



ಭಾರತದ ವಿವಿಧ ಭಾಗಗಳಲ್ಲಿ ಭಾರೀ ಪ್ರಮಾಣದ ಆತ್ಮಾಹುತಿ ದಾಳಿಗಳನ್ನು ನಡೆಸಲು ಪಾಕಿಸ್ತಾನ ಮೂಲದ ಉಗ್ರ ಸಂಘಟನೆ ಜೈಷ್-ಎ-ಮೊಹಮ್ಮದ್ (JeM) ರಾಕ್ಷಸೀಯ ಸಂಚು ರೂಪಿಸಿದೆ ಎಂದು ಗುಪ್ತಚರ ಮಾಹಿತಿ ತಿಳಿಸಿದೆ. ಈ ಭಯಾನಕ ಯೋಜನೆಗಾಗಿ ಸಂಘಟನೆಯು ಈಗಾಗಲೇ ಕೋಟ್ಯಂತರ ರೂಪಾಯಿ ದೇಣಿಗೆ ಸಂಗ್ರಹಿಸುತ್ತಿದೆ.

**ಕೋಟ್ಯಂತರ ರೂಪಾಯಿ ದೇಣಿಗೆ ಸಂಗ್ರಹಣೆ**

ಜೈಷ್ ಸಂಘಟನೆ 'ದೇಣಿಗೆ' ಎಂಬ ಹೆಸರಿನಲ್ಲಿ ಪಾಕಿಸ್ತಾನದಲ್ಲಿ ಭಾರಿ ಪ್ರಮಾಣದಲ್ಲಿ ಹಣ ಸಂಗ್ರಹಿಸುತ್ತಿದ್ದು, ಪ್ರತಿ ವ್ಯಕ್ತಿಯಿಂದ 20,000 ಪಾಕಿಸ್ತಾನ ರೂ. (ಭಾರತೀ ಮೌಲ್ಯದಲ್ಲಿ ಸುಮಾರು ₹6,400) ಪಡೆಯಲಾಗುತ್ತಿದೆ ಎಂಬ ವರದಿಗಳು ಬಂದಿದೆ. ಈ ಹಣವನ್ನು ಭಾರತದಲ್ಲಿನ ಚಳಿಗಾಲದ ತಿಂಗಳುಗಳಲ್ಲಿ ಕಾಶ್ಮೀರ ಮಾರ್ಗದ ಮೂಲಕ ಉಗ್ರರನ್ನು ನುಸುಳಿಸಲು ಅಗತ್ಯವಾದ ಚಳಿಗಾಲದ ಕಿಟ್ ಹಾಗೂ ಸ್ಫೋಟಕ ವಸ್ತುಗಳ ತಯಾರಿಕಾ ಚಟುವಟಿಕೆಗಳಿಗೆ ಬಳಸಲಾಗುತ್ತಿದೆ ಎಂದು ತನಿಖಾಧಿಕಾರಿಗಳು ಶಂಕೆ ವ್ಯಕ್ತಪಡಿಸಿದ್ದಾರೆ.

ಉಗ್ರರ ಚಳಿಗಾಲ ನುಸುಳಿಕೆಗಾಗಿ ಸಿದ್ಧತೆ

ಉಗ್ರರು ಗಡಿ ದಾಟುವಾಗ ಎದುರಿಸುವ ಶೀತ, ತೀವ್ರವಾಗಿರುವುದರಿಂದ ಅವರಿಗೆ ಶೀತನಿರೋಧಕ ವಿಂಟರ್ ಕಿಟ್, ದಪ್ಪ ಉಡುಪು, ವಿಶೇಷ ಶೂ, ಶೀತ ನಿರೋಧಕ ಹೊದಿಕೆ, ಬ್ಯಾಗ್, ಕೈಗವಸು, ಜೊತೆಗೆ ಗುಪ್ತವಾಗಿ ತಂಗಿ ಚಲಿಸಲು ಅಗತ್ಯವಾದ ಟೆಂಟ್ ಖರೀದಿಸಲು ಈ ಹಣವನ್ನು ದುರುಪಯೋಗ ಮಾಡಲಾಗುತ್ತಿದೆ.

ಚಳಿಗಾಲದಲ್ಲಿ ಗಡಿ ಪ್ರದೇಶದ ವೀಕ್ಷಣೆಯಲ್ಲಿ ಇರುವ ಕೊರತೆ ಹಾಗೂ ಮಂಜು-ಮಂಜಿನ ಕಾರಣದಿಂದ ದೃಷ್ಟಿ ಸಮಸ್ಯೆ ಉಂಟಾಗುವ ಸಂದರ್ಭವನ್ನು ಜೈಷ್ ಸಂಘಟನೆ ದುರುಪಯೋಗಪಡಿಸಿಕೊಳ್ಳಲು ಯತ್ನಿಸುತ್ತಿರುವುದಾಗಿ ಗುಪ್ತಚರ ಸಂಸ್ಥೆಗಳ ಮೂಲಗಳು ತಿಳಿಸಿವೆ.

**ಬಾಂಬ್-ಐಇಡಿ ತಯಾರಿ ಚಟುವಟಿಕೆಗಳಿಗೆ ಹಣ ಬಳಕೆ**

ದೇಣಿಗೆಯ ಮೂಲಕ ಸಂಗ್ರಹವಾಗುತ್ತಿರುವ ಹಣವನ್ನು ಸ್ಫೋಟಕ ವಸ್ತುಗಳು, ಐಇಡಿ ತಯಾರಿ ಸಾಮಗ್ರಿ, ಸಂವಹನ ಉಪಕರಣಗಳು ಮತ್ತು ನುಸುಳಿಕೆಗೆ ಅಗತ್ಯವಾದ ಸಹಾಯಕ ಸಾಮಗ್ರಿಗಳ ಖರೀದಿಗೂ ಬಳಸಲಾಗುತ್ತಿದೆ ಎಂದು ಹೇಳಲಾಗಿದೆ. ಇತ್ತೀಚೆಗೆ ನಡೆದ ದೆಹಲಿಯ ಕೆಂಪುಕೋಟೆ ಕಾರ್ ಬಾಂಬ್ ಸ್ಫೋಟ ಘಟನೆಯಲ್ಲಿ, ಜೈಷ್ -ಎ -ಮೊಹಮ್ಮದ್ ಪಾತ್ರ ಇದೆ ಎಂದು ಶಂಕೆ ವ್ಯಕ್ತವಾಗಿದೆ.

**ಡಿಜಿಟಲ್ ಮೂಲಕವೂ ಹಣ ಸಂಗ್ರಹಣೆಗೆ ಪ್ಲಾನ್**

ಹೊಸದಾಗಿ, ಜೈಷ್ ಸಂಘಟನೆಯು ಪಾಕಿಸ್ತಾನದಲ್ಲಿ ಉಪಯೋಗಿಸಲಾಗುವ ('ಸದಾ ಪೇ') ಎಂಬ ಆಂಡ್ರಾಯ್ಡ್ ಆಪ್ ಮೂಲಕವೂ ಡಿಜಿಟಲ್ ದೇಣಿಗೆ ಸಂಗ್ರಹಿಸುತ್ತಿರುವುದು ಬೆಳಕಿಗೆ ಬಂದಿದೆ. ಆನ್‌ಲೈನ್ ಬ್ಯಾಂಕಿಂಗ್, ಇ-ವಾಲೆಟ್, ಟೋಕನ್ ಪೇಮೆಂಟ್ ಸೇವೆಗಳ ಮೂಲಕ ಹಣ ಸಂಗ್ರಹಿಸಲಾಗಿದೆ ಎಂದು ಹೇಳಲಾಗಿದೆ. ಭಾರತದಲ್ಲೂ ದೇಣಿಗೆ ಸಂಗ್ರಹಿಸಲು ಯತ್ನಿಸಲಾಗುತ್ತಿದೆ ಎಂದು ಹೇಳಲಾಗಿದೆ.

**ಮಹಿಳೆಯರನ್ನು ಬಳಸುವ ಹೊಸ ತಂತ್ರ**

ಜೈಷ್ ನಾಯಕ ಮಸೂದ್ ಅಜರ್ ಅವರ ಸಹೋದರಿ ಸಯೀದಾ ಅಜರ್ ಮಹಿಳೆಯರನ್ನು ಬಳಸಿ ಆತ್ಮಾಹುತಿ ದಾಳಿಗಳನ್ನು ನಡೆಸುವ ಯೋಜನೆ ರೂಪಿಸುತ್ತಿದ್ದಾರೆ ಎಂಬ ಆತಂಕಕಾರಿ ಮಾಹಿತಿ ಸಹ ಬಂದಿದೆ. ಮಹಿಳಾ ಫಿದಾಯೀನ್ ಬಳಸಿ ಭದ್ರತಾ ವ್ಯವಸ್ಥೆಯನ್ನು ತಪ್ಪಿಸಲು ಜೈಷ್ ಹೊಸ ವಿಧಾನಕ್ಕೆ ಮುಂದಾಗಿದೆ ಎಂದು ಗುಪ್ತಚರ ಸಂಸ್ಥೆಗಳು ತನಿಖೆ ನಡೆಸುತ್ತಿವೆ.

## ಶಬರಿಮಲೆ ಅಯ್ಯಪ್ಪ ದರ್ಶನಕ್ಕೆ ಸರತಿ ಸಾಲಿನಲ್ಲಿ ನಿಂತಿದ್ದ ಮಹಿಳೆ ಕುಸಿದು ಬಿದ್ದು ಸಾವು



ಕೇರಳದ ಶಬರಿಮಲೆ ಅಯ್ಯಪ್ಪ ದೇವಸ್ಥಾನದಲ್ಲಿ ಭಾರೀ ಜನದಟ್ಟಣೆ ಇದ್ದು, ದರ್ಶನಕ್ಕಾಗಿ ಸರತಿ ಸಾಲಿನಲ್ಲಿ ನಿಂತಿದ್ದ 58 ವರ್ಷದ ಮಹಿಳೆ ಒಬ್ಬರು ಕುಸಿದು ಬಿದ್ದು ಮೃತಪಟ್ಟಿದ್ದಾರೆ. ಮಾಹಿತಿಯ ಪ್ರಕಾರ, ಮೃತಪಟ್ಟವರು ಕೋಝಿಕ್ಕೋಡ್ ಜಿಲ್ಲೆಯ ಕೊಯಿಲಾಂಡಿ ನಿವಾಸಿ ಎಂದು ಗುರುತಿಸಲಾಗಿದೆ.

ಕೋಝಿಕ್ಕೋಡ್ ಜಿಲ್ಲೆಯ ಕೊಯಿಲಾಂಡಿ ಪ್ರದೇಶದ ನಿವಾಸಿಯಾಗಿದ್ದ ಈ ಮಹಿಳೆ ಶನಿವಾರ ರಾತ್ರಿಯಿಂದ್ದ ಭಕ್ತರ ಜೊತೆಗೂಡಿ ಸಾಲಿನಲ್ಲಿ ನಿಂತಿದ್ದರು. ಸನ್ನಿಧಾನದತ್ತ ಹೋಗುವ ಮಾರ್ಗದಲ್ಲಿ ಭಾರೀ ಜನದಟ್ಟಣೆ ಉಂಟಾಗಿದ್ದು, ಈ ವೇಳೆ ಮಹಿಳೆಗೆ ಏಕಾಏಕಿ ಉಸಿರಾಟದ ತೊಂದರೆ ಕಾಣಿಸಿಕೊಂಡು ತಕ್ಷಣ ಕುಸಿದು ಬಿದ್ದಿದ್ದಾರೆ. ತಿರುವಾಂಕೂರು ದೇವಸ್ವಂ ಬೋರ್ಡ್ (TDB) ಅಧ್ಯಕ್ಷ ಕೆ. ಜಯಕುಮಾರ್ ಈ ಘಟನೆ ಬಗ್ಗೆ ಮಾತನಾಡಿ, "ಅವರಿಗೆ ಹೃದಯಾಘಾತ ಅಥವಾ ಉಸಿರುಗಟ್ಟಿದ್ದರಿಂದ ಮೃತಪಟ್ಟಿದ್ದಾರೆ. ಮೃತದೇಹವನ್ನು TDB ವೆಚ್ಚದಲ್ಲೇ ಆಂಬ್ಯುಲೆನ್ಸ್‌ನಲ್ಲಿ ಅವರ ಗ್ರಾಮಕ್ಕೆ ಕಳುಹಿಸಲಾಗಿದೆ ಎಂದು ತಿಳಿಸಿದರು.

# ಜಲ ಮಾಲಿನ್ಯ ಕಡಿಮೆ ಮಾಡಲು ಕ್ರಮ ಕೈಗೊಳ್ಳುವಂತೆ ಸಿಎಂ ಸಿದ್ದುಗೆ ಪಿಎಂ ನರೇಂದ್ರಸ್ವಾಮಿ ಮನವಿ



**ಬೆಂಗಳೂರು**: ಬಹುತೇಕ ಜಿಲ್ಲೆಗಳಲ್ಲಿ ತ್ಯಾಜ್ಯ ನೀರು ನಿರ್ವಹಣಾ ಘಟಕ (STP)ಗಳು ಸರಿಯಾಗಿ ಕೆಲಸ ಮಾಡದೆ ಕೊಳಚೆ ನೀರು ನದಿ ಸೇರುತ್ತಿವೆ. ಇದನ್ನು ತಡೆಯಲು ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಸೂಚನೆ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರಾದ ಪಿಎಂ ನರೇಂದ್ರಸ್ವಾಮಿ ಮನವಿ ಮಾಡಿದರು.

ಬೆಂಗಳೂರಿನಲ್ಲಿ ನಡೆದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವದ ಸಮಾರೋಪ ಸಮಾರಂಭದಲ್ಲಿ ಪ್ರಸ್ತಾವಿಕ ಭಾಷಣ ಮಾಡಿದ ನರೇಂದ್ರಸ್ವಾಮಿ ಅವರು, ಜಲ ಮಾಲಿನ್ಯ ತಡೆಯಲು ಮಂಡಳಿಯು ರಾಜ್ಯದಲ್ಲಿರುವ ನದಿ ನೀರು ಮಾಪನ ಕೇಂದ್ರಗಳನ್ನು ಹೆಚ್ಚಿಸಲು ನಿರ್ಧರಿಸಿದೆ ಎಂದು ತಿಳಿಸಿದರು. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ತ್ಯಾಜ್ಯದಿಂದ ರಸ್ತೆ ನಿರ್ಮಾಣ ಮಾಡುವ ಆವಿಷ್ಕಾರವನ್ನು ಮಾಡಲಾಗಿದೆ. ಇದೇ ರೀತಿ ಎಲ್ಲಾ ಜಿಲ್ಲೆಗಳಲ್ಲೂ ತ್ಯಾಜ್ಯವನ್ನು ಸಮರ್ಪಕವಾಗಿ ಮರುಬಳಕೆ ಆಗುವಂತೆ ಕ್ರಮ ಕೈಗೊಳ್ಳಲು ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದರು.

ದಾವಣಗೆರೆ ಜಿಲ್ಲೆಯಲ್ಲಿ ಗೃಹ ಬಳಕೆಯ ಪ್ಲಾಸ್ಟಿಕ್ ತ್ಯಾಜ್ಯವನ್ನು ಸಂಗ್ರಹಿಸಿ, ಸಂಸ್ಕರಿಸಲಾಗುತ್ತಿದೆ. ಇದು ರಾಜ್ಯಕ್ಕೆ ಮಾದರಿಯಾಗಬೇಕು. ಎಲ್ಲಾ ಜಿಲ್ಲೆಗಳೂ ಇದೇ ರೀತಿ ಏಕ ಬಳಕೆ ಪ್ಲಾಸ್ಟಿಕ್ ಮುಕ್ತ ಮಾಡಲು ಕ್ರಮ ಕೈಗೊಳ್ಳುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಬೇಕೆಂದು ನರೇಂದ್ರಸ್ವಾಮಿ ಅವರು ಸಿಎಂಗೆ ಕೇಳಿಕೊಂಡರು. ಅಲ್ಲದೆ ತ್ಯಾಜ್ಯ ಕಡಿಮೆ ಮಾಡಿ, ಪುನರ್ ಬಳಕೆ ಹೆಚ್ಚಿಸುವುದಕ್ಕೆ ಪೂರಕವಾಗಿ ವರ್ತುಲ ಅರ್ಥವ್ಯವಸ್ಥೆ ಮತ್ತು ಸುಸ್ಥಿರತೆ ಎಂಬ ವಿಚಾರ ಸಂಕಿರಣದಲ್ಲಿ ತಜ್ಞರು ನೀಡಿದ ಸಲಹೆಯನ್ನು ಆಧರಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದರು.

ಪರಿಸರ ಸಂರಕ್ಷಣೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು, ಮಾಲಿನ್ಯ ನಿಯಂತ್ರಣ ಮಂಡಳಿಯನ್ನು ಹಳ್ಳಿ ಹಳ್ಳಿಗೆ ಕೊಂಡೊಯ್ಯುವುದು ಮತ್ತು ಮಂಡಳಿ ಸ್ಥಾಪನೆಯಾಗಲು ಕಾರಣಕರ್ತರಾದ ಶ್ರೀಮತಿ ಇಂದಿರಾ ಗಾಂಧಿ ಅವರನ್ನು ಸ್ಮರಿಸುವುದು ಸುವರ್ಣ ಮಹೋತ್ಸವದ ಉದ್ದೇಶವಾಗಿದೆ. ಇದೇ ಕಾರಣಕ್ಕೆ ಬೆಂಗಳೂರಿನಲ್ಲಿ ಮಾತ್ರವೇ ಸುವರ್ಣ ಮಹೋತ್ಸವ ಮಾಡದೆ ರಾಜ್ಯದ 25 ಜಿಲ್ಲೆಗಳನ್ನು ಒಳಗೊಂಡು 14 ಕಡೆ ಕಾರ್ಯಕ್ರಮಗಳನ್ನು ಮಾಡಲಾಗಿದೆ. ಇಂದಿರಾ ಗಾಂಧಿ ಅವರ ಜನ್ಮದಿನವಾದ ಇಂದು (ನ. 19) ಬೆಂಗಳೂರಿನಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ, ತುಮಕೂರು, ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಸಹಯೋಗದೊಂದಿಗೆ ಬೆಂಗಳೂರಿನಲ್ಲಿ ಸಮಾರೋಪ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

1972ರಲ್ಲಿ ವಿಶ್ವಸಂಸ್ಥೆಯ ಸ್ಟಾಕ್‌ಹೋಮ್ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಇಂದಿರಾ ಗಾಂಧಿ ಮಾಲಿನ್ಯ ನಿಯಂತ್ರಣ ಮಂಡಳಿಗಳನ್ನು ಸ್ಥಾಪನೆ ಮಾಡಿರುವುದು ಮಾತ್ರವಲ್ಲ, ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣಕ್ಕೆ ಸಂಬಂಧಪಟ್ಟಂತೆ ಹಲವು ಕಾಯಿದೆಗಳನ್ನು ಜಾರಿಗೆ ತಂದರು. 1972ರಲ್ಲಿ ರಾಷ್ಟ್ರೀಯ ಪರಿಸರ ಯೋಜನೆ ಮತ್ತು ಸಮನ್ವಯ ಸಮಿತಿ ರಚಿಸಿದರು. ಅದೇ ವರ್ಷ ಅಳಿವಿನಂಚಿನಲ್ಲಿರುವ ಪ್ರಾಣಿ-ಪಕ್ಷಿಗಳ ಪ್ರಭೇದಗಳನ್ನು ರಕ್ಷಿಸಲು ವನ್ಯಜೀವಿ ಸಂರಕ್ಷಣಾ ಕಾಯ್ದೆ - 1972 ಅನ್ನು ಜಾರಿಗೆ ತಂದರು. 1973ರಲ್ಲಿ ಅಳಿವಿನಂಚಿನಲ್ಲಿರುವ ಹುಲಿಗಳನ್ನು ಮತ್ತು ಅವುಗಳ ಆವಾಸಸ್ಥಾನಗಳನ್ನು ರಕ್ಷಿಸಲು ಪ್ರಾಜೆಕ್ಟ್ ಟೈಗರ್ ಎಂಬ ವನ್ಯಜೀವಿ ಸಂರಕ್ಷಣಾ ಯೋಜನೆಯನ್ನು ರೂಪಿಸಿದರು. 1974ರಲ್ಲಿ ಜಲ ಮಾಲಿನ್ಯ ನಿಯಂತ್ರಣ ಕಾಯ್ದೆಯನ್ನು ಜಾರಿಗೆ ತಂದರು. ಅದೇ ವರ್ಷ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅಧೀನದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಗಳನ್ನು ಸ್ಥಾಪಿಸಿದರು. 1981ರಲ್ಲಿ ವಾಯು (ಮಾಲಿನ್ಯ ತಡೆ ಮತ್ತು ನಿಯಂತ್ರಣ) ಕಾಯ್ದೆ ಜಾರಿಗೆ ತಂದರು. ಸುವರ್ಣ ಮಹೋತ್ಸವದ ವೇಳೆ ಈ ಕಾಯಿದೆಗಳ ಬಗ್ಗೆ ಜನರಿಗೆ ತಿಳಿಸಲಾಗುತ್ತಿದೆ ಎಂದು ಹೇಳಿದರು.

ಇದಲ್ಲದೆ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರು 1986ರಲ್ಲಿ ಪರಿಸರ ಸಂರಕ್ಷಣೆ ಕಾಯ್ದೆ ಮತ್ತು 1989ರಲ್ಲಿ ರಾಷ್ಟ್ರೀಯ ಅರಣ್ಯ ನೀತಿ ಜಾರಿಗೆ ತಂದರು. 2005ರಲ್ಲಿ ಯುಪಿಎ ಅಧ್ಯಕ್ಷೆಯಾಗಿದ್ದ ಸೋನಿಯಾ ಗಾಂಧಿ ಅವರ ಒತ್ತಾಸೆಯಿಂದಾಗಿ ಅರಣ್ಯ ಹಕ್ಕು ಕಾಯ್ದೆ ಮತ್ತು 2011ರಲ್ಲಿ ರಾಷ್ಟ್ರೀಯ ಹಸಿರು ನ್ಯಾಯಾಧೀಕರಣ ಸ್ಥಾಪನೆ ಮಾಡಲಾಯಿತು. ಅವರನ್ನೂ ಸ್ಮರಿಸಿಕೊಳ್ಳಬೇಕಾಗಿದೆ ಎಂದು ಹೇಳಿದರು. ಶಕ್ತಿ ಯೋಜನೆಯಿಂದ ಮಾಲಿನ್ಯ ನಿಯಂತ್ರಣ

ಸುವರ್ಣ ಮಹೋತ್ಸವದ ಅಂಗವಾಗಿ ರಾಜ್ಯದ ಪ್ರತಿ ವಿಧಾನಸಭಾ ಕ್ಷೇತ್ರ ಮಟ್ಟದಲ್ಲೂ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಹತ್ತು-ಹಲವು ರೀತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಪರಿಸರ ಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳ ಪಾಲ್ಗೊಳ್ಳುವಿಕೆ ಹೆಚ್ಚಿಸಲು ಅವರಿಗೆ ಚಿತ್ರಕಲೆ ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು ಅದೇ ರೀತಿ ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣ ಮಾಡುವುದರಲ್ಲಿ ಯುವಕರ ಪಾತ್ರ ಕೂಡ ಮಹತ್ವದ್ದು ಎಂದು ಪರಿಗಣಿಸಿ 'ಪರಿಸರದ ಬಗ್ಗೆ ರಿಲ್ಸ್ ಮಾಡಿ ಬಹುಮಾನ ಗೆಲ್ಲಿ' ಎಂಬ ಸ್ಪರ್ಧೆ ಆಯೋಜಿಸಲಾಗಿತ್ತು ಎಂದು ಹೇಳಿದರು.

ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ನಿಯಂತ್ರಣಕ್ಕೆ ಕೆಲಸ ಮಾಡಿದ ಸಾಧಕರಿಗೆ ರಾಜ್ಯ ಮಟ್ಟದಲ್ಲಿ ಐವರಿಗೆ ಮತ್ತು ಜಿಲ್ಲಾ ಮಟ್ಟದಲ್ಲಿ ಐವರಿಗೆ 'ಇಂದಿರಾ ಪ್ರಿಯದರ್ಶಿನಿ ಪರಿಸರ ಪ್ರಶಸ್ತಿ' ನೀಡಲಾಗಿದೆಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವರಾದ ಈಶ್ವರ ಖಂಡ್ರೆ, ದಿನೇಶ್ ಗುಂಡೂರಾವ್, ಚಲುವರಾಯಸ್ವಾಮಿ, ಡಾ. ಎಂ.ಸಿ. ಸುಧಾಕರ್, ಶಾಸಕರಾದ ಡಾ. ಅಶ್ವಥ್ ನಾರಾಯಣ, ಪೊನ್ನಣ್ಣ, ವಿಧಾನ ಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ನಸೀರ್ ಅಹಮದ್ ಮತ್ತಿತರರು ಉಪಸ್ಥಿತರಿದ್ದರು

## ಮಹಿಳೆಯರ ಸಬಲೀಕರಣಕ್ಕಾಗಿ ಗೃಹಲಕ್ಷ್ಮೀ ಬ್ಯಾಂಕ್ ಸ್ಥಾಪನೆ: ಲಕ್ಷ್ಮೀ ಹೆಬ್ಬಾಳ್ಕರ್



**ಬೆಂಗಳೂರು**: ಕರ್ನಾಟಕ ದಲ್ಲಿ ಮಹಿಳೆಯರ ಸಬಲೀ ಕರಣಕ್ಕಾಗಿ ಎಸ್.ಎಂ. ಕೃಷ್ಣ ಅವರ ಕಾಲದಲ್ಲಿ ಮೋಟಮ್ಮ ಅವರು ಸಚಿವರಾಗಿದ್ದಾಗ ಸ್ತ್ರೀ ಶಕ್ತಿ ಸಂಘಗಳನ್ನು ಸ್ಥಾಪಿಸಿ, ಮಹಿಳೆಯರಿಗೆ ಅನುಕೂಲ ಮಾಡಿಕೊಡಲಾಗಿತ್ತು. ಇದೀಗ ಗೃಹಲಕ್ಷ್ಮಿ ಬ್ಯಾಂಕ್ ತರಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಬೆಂಗಳೂರಿನಲ್ಲಿ ನವೆಂಬರ್ 28 ರಂದು ನಡೆಯಲಿರುವ ಐಸಿಡಿಎಸ್ ಸುವರ್ಣ ಮಹೋತ್ಸವ, ಅಕ್ಕ ಪಡೆ ಲೋಕಾರ್ಪಣೆ, ಗೃಹಲಕ್ಷ್ಮಿ ಬ್ಯಾಂಕ್ ಗೆ ಚಾಲನೆ ಕುರಿತು ಬಾಲ ಭವನದಲ್ಲಿ ನಡೆದ ಜಿಲ್ಲಾಮಟ್ಟದ ಪೂರ್ವಬಾವಿ ಸಭೆಯಲ್ಲಿ ಸಚಿವರು ಮಾತನಾಡಿದರು. ಬಹುನಿರೀಕ್ಷಿತ ಕಾರ್ಯಕ್ರಮದ ಯಶಸ್ಸಿಗೆ ಎಲ್ಲರೂ ಸಹಕರಿಸಬೇಕು. ತುಮಕೂರು ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಹಿಂದೆ ಗಂಡನ ಉದ್ಯಮದಲ್ಲಿ ಹೆಂಡತಿ ಕೈಜೋಡಿಸುತ್ತಿದ್ದಳು. ಆದರೆ, ಇತ್ತೀಚೆಗೆ ಮಹಿಳೆಯರೆ ಉದ್ಯಮಿಗಳಾಗುತ್ತಿದ್ದಾರೆ. ಇಂತಹ ಮಹಿಳೆಯರಿಗೆ ಸಹಾಯ ಮಾಡುವ ಉದ್ದೇಶದಿಂದಲೇ ಗೃಹಲಕ್ಷ್ಮಿ ಬ್ಯಾಂಕ್ ಆರಂಭಿಸಲಾಗುತ್ತಿದೆ. ಧರ್ಮಸ್ಥಳ ಸ್ವಸಹಾಯ ಸಂಘ ಕಳೆದ 20 ವರ್ಷಗಳಿಂದ ಹೊಸ ಕ್ರಾಂತಿಯನ್ನೇ ಸೃಷ್ಟಿಸಿದೆ. ಅವರ ಸೇವೆ ಸದಾ ಸ್ಮರಣೀಯ. ಆದರೆ ಕೆಲವೊಂದು ಖಾಸಗಿ ಫೈನಾನ್ಸ್ ಕಂಪನಿಗಳಿಂದ ಜನರಿಗೆ ತೊಂದರೆಯಾಗುತ್ತಿದೆ. ಇದನ್ನು ತಡೆಗಟ್ಟಲು ಗೃಹಲಕ್ಷ್ಮಿ ಸಂಘ ಸಹಾಯವಾಗಲಿದೆ. ಕಡಿಮೆ ಬಡ್ಡಿದರದಲ್ಲಿ ಸಾಲ ನೀಡಲಾಗುವುದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಗೃಹಲಕ್ಷ್ಮಿ ಸಂಘಕ್ಕೆ ಸೇರ ಬಯಸುವವರಿಗೆ ಯಾವುದೇ ಒತ್ತಡ ಇಲ್ಲ. ಬ್ಯಾಂಕ್ ಗೆ ಸೇರ ಬಯಸುವವರು ಸಾವಿರ ರೂಪಾಯಿ ಕೊಟ್ಟು ಶೇರ್ ಹೋಲ್ಡರ್ ಆಗಬೇಕು. ಸಂಪೂರ್ಣ ಕ್ಯಾಶ್ ಲೆಸ್ ವ್ಯವಹಾರ ನಡೆಯಲಿದ್ದು, ಷೇರುದಾರರಾದ ಬಳಿಕ ಪ್ರತಿ ತಿಂಗಳು ಇನ್ನೂರು ರೂಪಾಯಿ ಕಟ್ಟಬೇಕು, ಆರು ತಿಂಗಳಲ್ಲಿ ಲೋನ್ ಪಡೆಯಬಹುದು, ಮೂವತ್ತು ಸಾವಿರದಿಂದ ಮೂರು ಲಕ್ಷದವರೆಗೂ ಸಾಲ ನೀಡಲಾಗುವುದು.

ಗೃಹಲಕ್ಷ್ಮಿ ಬ್ಯಾಂಕ್ ನಲ್ಲಿ ವೈಯಕ್ತಿಕ ಸಾಲ ಮಾತ್ರ ನೀಡಲಾಗುವುದು, ಗುಂಪು, ಸಂಘಗಳಿಗೆ ಸಾಲ ನೀಡಲಾಗುವುದಿಲ್ಲ. ರಾಷ್ಟ್ರೀಕೃತ ಬ್ಯಾಂಕುಗಳ ಬಡ್ಡಿದರದಲ್ಲಿ ಸಾಲ ನೀಡಲಾಗುವುದು. ಇದು ಇಡೀ ವಿಶ್ವದಲ್ಲೇ ದಾಖಲೆಯಾಗಿ ಉಳಿಯಲಿದೆ. ಬ್ಯಾಂಕ್ ಬಗ್ಗೆ ಇಂಥಹ ಪರಿಕಲ್ಪನೆಯನ್ನು ಇಟ್ಟುಕೊಂಡಿರುವೆ ಎಂದರು.

ಮುಂದೆ ಯಾವುದೇ ಸರ್ಕಾರಗಳು ಬಂದರೂ ಗೃಹಲಕ್ಷ್ಮಿ ಬ್ಯಾಂಕ್ ಅನ್ನು ಮುಚ್ಚುವ ಪ್ರಯತ್ನ ಮಾಡುವುದಿಲ್ಲ. ಇದು ನಿರಂತರ ಪ್ರಕ್ರಿಯೆ. ಮಹಿಳೆಯರಿಗೆ ಅನುಕೂಲ ಆಗುವ ದೃಷ್ಟಿಯಿಂದ ಬ್ಯಾಂಕ್ ತೆರೆಯಲಾಗುತ್ತಿದ್ದು, ಕೃಷಿ, ಹೈನುಗಾರಿಕೆ, ವಾಹನ, ಮಕ್ಕಳ ವಿದ್ಯಾಭ್ಯಾಸ ಸೇರಿದಂತೆ ವಿವಿಧ ರೀತಿಯಲ್ಲಿ ಲೋನ್ ತೆಗೆದುಕೊಳ್ಳಬಹುದು ಎಂದರು.

## ಪ್ರಾಂತ ರೈತ ಸಂಘದಿಂದ ಸರ್ಕಾರದ ವಿರುದ್ಧ ಪ್ರತಿಭಟಣೆ: ಈರಣ್ಣ



**ದೇವನಹಳ್ಳಿ**: ರಾಜ್ಯ ಹಾಗೂ ಕೇಂದ್ರ ಸರ್ಕಾರ ಬಡವರ ಹಕ್ಕುಗಳನ್ನು ಈಡೇರಿಸುವಲ್ಲಿ ವಿಫಲ ರಾಗಿದ್ದಾರೆ. ಸ್ವತಂತ್ರ ಪೂರ್ವದಿಂದ ಇಲ್ಲಿವರೆಗೆ ಸಿರಿವಂತರ ಕೆಲಸಗಳಲ್ಲಿ ಮುಂಚೂಣಿಯಲ್ಲಿರುವ ಭ್ರಷ್ಟ ಸರ್ಕಾರಗಳಿಗೆ ತಕ್ಕ ಪಾಠ ಕಲಿಸಲು ಪ್ರಾಂತ ರೈತ ಸಂಘ ಕಳೆದ ಹಲವು ವರ್ಷಗಳಿಂದ ಹೋರಾಟಗಳನ್ನು ನಡೆಸಿಕೊಂಡು ಬರುತ್ತಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ಈರಣ್ಣವರು ಸರ್ಕಾರದ ವಿರುದ್ಧ ಆರೋಪಿಸಿದರು.

ದೇವನಹಳ್ಳಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪ್ರಾಂತ ರೈತ ಸಂಘ ಕರೆಯಲಾಗಿದ್ದ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಡಿ. 21 ರಂದು ರಾಜ್ಯ ಸಂಘದ ನಿರ್ದೇಶನದಂತೆ ಬಗರ್ ಹುಕುಂ ಸಾಗುವಳಿ ಹಾಗೂ ಬಡವರಿಗೆ ನಿವೇಶನ ಹಂಚಿಕೆ ನಿರ್ಲಕ್ಷ್ಯ ಖಂಡಿಸಿ ಭ್ರಷ್ಟ ಆಡಳಿತ ವ್ಯವಸ್ಥೆ ವಿರುದ್ಧ ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳುವ ಉದ್ದೇಶ ದಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯಿಂದ ಸುಮಾರು 500ಕ್ಕೂ ಹೆಚ್ಚು ಕಾರ್ಯಕರ್ತರು ಹೋರಾಟದಲ್ಲಿ ಪಾಲ್ಗೊಳ್ಳುವ ಹಾಗೂ ಪೂರ್ವ ತಯಾರಿಯ ಬಗ್ಗೆ ಸಭೆ ಕರೆಯಲಾಗಿದೆ ಹಾಗಾಗಿ ಪ್ರಾಂತ ರೈತ ಸಂಘದ ಅಧಿಕಾರಿಗಳು ಹೋಬಳಿ, ಪಂಚಾಯಿತಿ ಗ್ರಾಮಮಟ್ಟದಲ್ಲಿ ಕಾರ್ಯಕರ್ತರನು ಒಗ್ಗೂಡಿಸಿ ಅಗತ್ಯ ಸೌಕರ್ಯಗಳಿಗೆ ಸಿದ್ಧತೆ ಮಾಡಿಕೊಳ್ಳಬೇಕಿದೆ ಎಂದು ತಿಳಿಸಿರುತ್ತಾರೆ.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ವೆಂಕಟ ರಾಜು, ಕೂಲಿ ಕಾರ್ಮಿಕರ ಸಂಘದ ರಾಜ್ಯ ಉಪಾಧ್ಯಕ್ಷ ಮದು, ರೈತ ಮುಖಂಡ ಮುನಿವೆಂಕಟಪ್ಪ, ಇನ್ನು ಅನೇಕರು ಹಾಜರಿದ್ದರು.

## 45 ಮೆಕ್ಕಾ ಯಾತ್ರಿಕರ ಶವ ಭಾರತಕ್ಕೆ ಬರಲ್ಲ

ಪುಟ 1ರಿಂದ ತೆಲಂಗಾಣ ಸರ್ಕಾರದ ನಿರ್ಧಾರ ಈ ದುರಂತದಲ್ಲಿ ಸಾವನ್ನಪ್ಪಿದವರಲ್ಲಿ ಬಹುತೇಕರು ತೆಲಂಗಾಣ ಮತ್ತು ಹೈದರಾಬಾದ್ ಮೂಲದವರು. ತೆಲಂಗಾಣ ಸಚಿವ ಸಂಪುಟ ತುರ್ತು ಸಭೆ ನಡೆಸಿದ್ದು, ಶವಗಳನ್ನು ಸೌದಿಯಲ್ಲೇ ಧಾರ್ಮಿಕ ವಿಧಿಗಳ ಪ್ರಕಾರ ಅಂತ್ಯಸಂಸ್ಕಾರ ಮಾಡುವ ನಿರ್ಧರಿಸಿದೆ. ಪ್ರತಿ ಕುಟುಂಬದಿಂದ ಇಬ್ಬರನ್ನು ಸೌದಿಗೆ ಕಳುಹಿಸಿ ಅಂತಿಮ ವಿಧಿಯಲ್ಲಿ ಪಾಲ್ಗೊಳ್ಳುವ ಅವಕಾಶವನ್ನು ನೀಡಿದೆ. ರಾಜ್ಯ ಸರ್ಕಾರ ಮೃತರ ಕುಟುಂಬಗಳಿಗೆ ತಲಾ ₹5 ಲಕ್ಷ ಪರಿಹಾರ ನೀಡುವುದಾಗಿ ತಿಳಿಸಿದೆ.

ಯಾತ್ರಿಕರ ಗುಂಪಿನ ವಿವರ: ಹೈದರಾಬಾದ್‌ನಿಂದ 54 ಯಾತ್ರಿಕರು ನವೆಂಬರ್ 9 ರಂದು ಉಮ್ರಾ ಯಾತ್ರೆಗೆ ಸೌದಿಗೆ ಹೊರಟಿದ್ದರು. 46 ಜನ ಬಸ್‌ನಲ್ಲಿ ಇದ್ದವರು ಅಪಘಾತದಿಂದ ಸಾವನ್ನಪ್ಪಿದ್ದಾರೆ. 4 ಜನ ಬೇರೆ ವಾಹನದಲ್ಲಿ ಪ್ರಯಾಣಿಸುತ್ತಿದ್ದರಿಂದ ಬದುಕುಳಿದಿದ್ದಾರೆ. ಮೃತರಲ್ಲಿ ಒಂದೇ ಕುಟುಂಬದ 18 ಸದಸ್ಯರು ಇದ್ದರು ಎಂದು ಹೇಳಲಾಗಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.